# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1265 (1374) |
| ಮಾನ್ಯ ಸದಸ್ಯರ ಹೆಸರು | ಡಾ|| ಉಮಾಶ್ರೀ (ನಾಮನಿರ್ದೇಶನ ಹೊಂದಿದವರು ) |
| ಉತ್ತರಿಸಬೇಕಾದ ದಿನಾಂಕ | 22.08.2025 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗದ 1 ರಿಂದ 8 ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆಯೇ; ರಾಜ್ಯದಲ್ಲಿ ಈ ವಿದ್ಯಾರ್ಥಿ ವೇತನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ ಮಾರ್ಗಸೂಚಿಗಳಂತೆ 2022-23 ನೇ ಸಾಲಿನಿಂದಲೂ 1ರಿಂದ 8 ನೇ ತರಗತಿಯ ವಿದ್ಯಾರ್ಥಿಗಳಿಗೆ ಮೆಟ್ರಿಕ್-ಪೂರ್ವ ವಿದ್ಯಾರ್ಥಿವೇತನ ನೀಡುತ್ತಿರುವುದಿಲ್ಲ.<br><br>ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ ಸಹಯೋಗದೊಂದಿಗೆ ಪಿಎಂ-ಯಶಸ್ವಿ ಯೋಜನೆಯಡಿ ಹಿಂದುಳಿದ ವರ್ಗಗಳ 9 ಮತ್ತು 10ನೇ ತರಗತಿಯ ವಿದ್ಯಾರ್ಥಿಗಳಿಗೆ ಮಾತ್ರ ವಿದ್ಯಾರ್ಥಿವೇತನ ಪಾವತಿಸಲಾಗುತ್ತಿರುತ್ತದೆ. |
| ಆ) | ಹಿಂದುಳಿದ ವರ್ಗದ 9 ರಿಂದ 10 ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆಯೇ; ರಾಜ್ಯದಲ್ಲಿ ಈ ವಿದ್ಯಾರ್ಥಿ ವೇತನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; | ಹಿಂದುಳಿದ ವರ್ಗದ 9 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗುತ್ತಿದೆ. 2024-25ನೇ ಸಾಲಿಗೆ ಈ ಕಾರ್ಯಕ್ರಮದಡಿ 9 ಮತ್ತು 10 ನೇ ತರಗತಿಯ ಹಿಂದುಳಿದ ವರ್ಗಗಳ 1,15,645 ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನ ಪಡೆದಿರುತ್ತಾರೆ. |
| ಇ) | 2025-26 ಸಾಲಿನಲ್ಲಿ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆಯೇ ಎಷ್ಟು ಅರ್ಜಿಗಳು ಬಂದಿವೆ; ಈ ಅರ್ಜಿಗಳನ್ನು ಪರಿಶೀಲಿಸಿ ವಿದ್ಯಾರ್ಥಿಗಳ ಆಯ್ಕೆ ಮಾಡಲಾಗಿದೆಯೇ? | ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 594 ಬಿಎಂ ಎಸ್ 2024 ದಿನಾಂಕ:09.08.2024 ರಲ್ಲಿ ಆದೇಶಿಸಿರುವಂತೆ ವಿದ್ಯಾರ್ಥಿಗಳಿಂದ ನೇರವಾಗಿ ಅರ್ಜಿಗಳನ್ನು ಆಹ್ವಾನಿಸುವುದಿಲ್ಲ.. ಅರ್ಹ ಅರ್ಜಿಗಳ ದತ್ತಾಂಶವನ್ನು ನೇರವಾಗಿ SSP ಮತ್ತು SATS ನಿಂದ ಪಡೆಯಲಾಗುತ್ತಿರುತ್ತದೆ.<br><br>ಈ ಕಾರ್ಯಕ್ರಮದಡಿ 2025-26 ನೇ ಸಾಲಿಗೆ ಅರ್ಹರಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ದತ್ತಾಂಶವನ್ನು ಒದಗಿಸುವಂತೆ ಇ-ಆಡಳಿತ ವ್ಯಾಪ್ತಿಗೆ ಬರುವ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (SSP) ರವರನ್ನು ಕೋರಲಾಗಿದೆ. |

ಕಡತ ಸಂಖ್ಯೆ: ಹಿಂವಕ 901 ಬಿಎಂಎಸ್ 2025

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.